## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಸ್ಥಾಪಿಸಿರುವ ಬಾಪೂಜಿ ಸೇವಾ ಕೇಂದ್ರಗಳಡಿ ಯಲ್ಲಿ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಕಾರ್ಡ್ ವಿತರಿಸುವ ಬಗ್ಗೆ.

**ಓದಲಾಗಿದೆ:** ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:HFWS-76-ARK-2019-20, ದಿನಾಂಕ: 16.11.2019.

******

## ಪ್ರಸ್ತಾವನೆ:

ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಯೋಜನೆಯು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಸಂಯೋಜಿತ ಯೋಜನೆಯಾಗಿದ್ದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸೇವೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ ಓದಲಾದ ಸರ್ಕಾರಿ ಪತ್ರದಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಆನ್ ಲೈನ್ ಸೇವೆಗಳ ಜೊತೆಗೆ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಕಾರ್ಡ್ ವಿತರಿಸುವ ಬಗ್ಗೆ ಕ್ರಮ ತೆಗೆದುಕೊಳ್ಳುವಂತೆ ಕೋರಿರುತ್ತಾರೆ

ಮುಂದುವರೆದು, ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಸ್ಥಾಪಿಸಿರುವ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಪ್ರಸ್ತುತ ಒದಗಿಸಲಾಗುತ್ತಿರುವ ಸೇವೆಗಳ ಜೊತೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಕಾರ್ಡ್ ವಿತರಿಸಿ ಸಾರ್ವಜನಿಕರಿಗೆ ತ್ವರಿತವಾಗಿ ಲಭ್ಯವಾಗುವಂತೆ ಮಾಡಲು ಸರ್ಕಾರವು ಉದ್ದೇಶಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/50/ಗ.ಕೋಶ/2019, ಬೆಂಗಳೂರು, ದಿನಾಂಕ: 11.12.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿಗಳು ಪಂಚತಂತ್ರ ತಂತ್ರಾಂಶದ ಮೂಲಕ ಈಗಾಗಲೇ ಸಾರ್ವಜನಿಕರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಹಾಗೂ ಕಂದಾಯ ಇಲಾಖೆಯ ಸೇವೆಗಳನ್ನು ನೀಡುತ್ತಿದ್ದು, ಜೊತೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಕಾರ್ಡ್ ವಿತರಿಸುವ ಬಗ್ಗೆ ಸರ್ಕಾರವು ಆದೇಶಿಸಿದೆ.

ಬಾಪೂಜಿ ಸೇವಾ ಕೇಂದ್ರದಲ್ಲಿ ಆರೋಗ್ಯ ಕರ್ನಾಟಕ ವೆಬ್ ಸೈಟ್ (http://arogya.karnataka.gov.in) ಮೂಲಕ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಕಾರ್ಡ್ ನ್ನು ವಿತರಿಸಬಹುದಾಗಿದೆ. ಈ ಸಂಬಂಧ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಪ್ರತ್ಯೇಕವಾಗಿ Login ID ಮತ್ತು Password ಗಳನ್ನು ಒದಗಿಸಲಾಗುವುದು.

.....2

ಸಂ: ಗ್ರಾಅಪ/ 50 /ಗ.ಕೋಶ/2019 ದಿನಾಂಕ: 11.12.2019

ಗ್ರಾಮ ಪಂಚಾಯತಿಗಳಲ್ಲಿ ಇ-ಹಾಜರಾತಿಗೆ ಬಳಸಲಾಗುತ್ತಿರುವ ಕಂಪ್ಯೂಟರ್ ಪರಿಕರದಲ್ಲಿ ಮಾತ್ರ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (ಎ.ಬಿ-ಎ.ಆರ್.ಕೆ) ಕಾರ್ಡ್ ನ್ನು ವಿತರಿಸಲು ಅನುವುಮಾಡಿಕೊಡಲಾಗಿದೆ. ಇ-ಹಾಜರಾತಿಯನ್ನು ಅಳವಡಿಸಿ ಬಳಸಲಾಗುತ್ತಿರುವ ಕಂಪ್ಯೂಟರ್ ಅನ್ನು ಹೊರತುಪಡಿಸಿ ಬೇರೆ ಯಾವ ಕಂಪ್ಯೂಟರ್ ನಲ್ಲಿ ಸದರಿ ಕಾರ್ಡ್ ಗಳನ್ನು ವಿತರಿಸಲು ಸಾಧ್ಯವಿರುವುದಿಲ್ಲ.

ಸದರಿ ಕಾರ್ಡ್ ಗಳನ್ನು ಗ್ರಾಮ ಪಂಚಾಯತಿಗಳಲ್ಲಿ ವಿತರಿಸುವ ಬಗ್ಗೆ ನೋಡಲ್ ಅಧಿಕಾರಿಗಳಾದ ಜಿಲ್ಲಾ ಕುಷ್ಠರೋಗ ಅಧಿಕಾರಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಡಾಟಾಎಂಟ್ರಿ ಆಪರೇಟರ್ ಗಳಿಗೆ ತರಬೇತಿಯನ್ನು ನೀಡಲು ಆದೇಶಿಸಿದೆ.

ಬಾಪೂಜಿ ಸೇವಾ ಕೇಂದ್ರಗಳಲ್ಲಿ ರೂ.10/- ಶುಲ್ಕದೊಂದಿಗೆ A4 ಅಳತೆಯ ಎ.ಬಿ-ಎ.ಆರ್.ಕೆ ಮಾಹಿತಿ ಮುದ್ರಿತ ಕಾಗದವನ್ನು ವಿತರಿಸುವುದು. ಪ್ರತಿ ಕೋರಿಕೆಗೆ ನಿಗದಿಗೊಳಿಸಲಾಗಿರುವ ಸೇವಾಶುಲ್ಕ ರೂ.10/- ಗಳನ್ನು ಗ್ರಾಮ ಪಂಚಾಯತಿಗಳು ಈಗಾಗಲೇ ತೆರೆದಿರುವ ಬಾಪೂಜಿ ಸೇವಾ ಕೇಂದ್ರಗಳ ಪ್ರತ್ಯೇಕ ಬ್ಯಾಂಕ್ ಖಾತೆಗೆ ಜಮೆ ಮಾಡುವುದು. ಸದರಿ ಸೇವಾ ಶುಲ್ಕದ ಮೊತ್ತವನ್ನು ಗ್ರಾಮ ಪಂಚಾಯತಿಗಳು ಆಡಳಿತಾತ್ಮಕ ವೆಚ್ಚ ಹಾಗೂ ಇನ್ನಿತರೆ ವೆಚ್ಚಗಳಿಗೆ ನಿಯಮಾನುಸಾರ ಬಳಸಿಕೊಳ್ಳಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ. ನಾಗರಾಜ)
ನಿರ್ದೇಶಕರು(ಇ-ಆಡಳಿತ) ಹಾಗೂ
ಪ/ನಿ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4. ಗ್ರಾಅಪ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಉಪ ಕಾರ್ಯದರ್ಶಿಗಳು/ಮುಖ್ಯ ಲೆಕ್ಕಾಧಿಕಾರಿ/ಮುಖ್ಯ ಯೋಜನಾಧಿಕಾರಿ/ಯೋಜನಾ ನಿರ್ದೇಶಕರುಗಳು.
7. ಎಲ್ಲಾ ಜಿಲ್ಲಾ ಕುಷ್ಠರೋಗ ಅಧಿಕಾರಿಗಳು.
8. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
9. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಸಂ: ಗ್ರಾಅಪ/ 50 /ಗ.ಕೋಶ/2019 ದಿನಾಂಕ: 11.12.2019

10. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
11. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.
12. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 266 ಪ್ರಕಾ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ
ಬೆಂಗಳೂರು, ದಿನಾಂಕ:09/12/2019.

**ಸುತ್ತೋಲೆ**

ವಿಷಯ: ಗ್ರಾಮಪಂಚಾಯತ್ ಮಟ್ಟದಲ್ಲಿನ ಬಾಪೂಜಿ ಸೇವಾ ಕೇಂದ್ರಗಳ ಮುಖಾಂತರ ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ( ಎಬಿ-ಎಆರ್ ಕೆ) ಕಾರ್ಡ್ ವಿತರಿಸುವ ಬಗ್ಗೆ.

*********

1. ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ (ಎಬಿ-ಎಆರ್ ಕೆ) ಯೋಜನೆಯು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಸಂಯೋಜಿತ ಯೋಜನೆಯಾಗಿದ್ದು ಅಕ್ಟೋಬರ್-2018 ರಿಂದ ರಾಜ್ಯಾದ್ಯಂತ ಜಾರಿಯಾಗುತ್ತಿದೆ. ಯೋಜನೆಯ ಸೇವೆಗಳನ್ನು ಸುಲಲಿತವಾಗಿ ಪಡೆದುಕೊಳ್ಳಲು (ಎಬಿ-ಎಆರ್ ಕೆ) ಕಾರ್ಡ್‌ಗಳನ್ನು ಪ್ರಸ್ತುತ ವಿವಿಧ ಹಂತದ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಒಡಂಬಡಿಕೆ ಮುಖಾಂತರ K1-B1 ಹಾಗೂ ಸೇವಾ ಸಿಂಧು ಸಿ.ಎಸ್.ಸಿ ಕೇಂದ್ರಗಳಲ್ಲಿ ನೀಡಲಾಗುತ್ತಿದೆ. ಎಬಿ-ಎಆರ್ ಕೆ ಮಾಹಿತಿ ಮುದ್ರಿತ ಎ4 ಅಳತೆಯ ಕಾರ್ಡ್‌ಗೆ ರೂ.10 ಶುಲ್ಕವನ್ನು ಹಾಗೂ ಪ್ಲಾಸ್ಟಿಕ್ ಕಾರ್ಡ್‌ಗಳಿಗೆ ರೂ. 35 ಶುಲ್ಕ ಪಡೆಯಲಾಗುತ್ತಿದೆ.

2. ಗ್ರಾಮೀಣ ಭಾಗದ ಬಡಕುಟುಂಬಗಳನ್ನು ತಲುಪಲು ಎಬಿ-ಎಆರ್ ಕೆ ಕಾರ್ಡ್ ವಿತರಣೆ ಉತ್ತಮ ಹೆಜ್ಜೆಯಾಗಿದ್ದು, **ಗ್ರಾಮ ಪಂಚಾಯತಿ ಮಟ್ಟದಲ್ಲಿರುವ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಎಬಿ-ಎಆರ್ ಕೆ ಕಾರ್ಡ್ ವಿತರಿಸಿದ್ದಲ್ಲಿ ಜನಸಾಮಾನ್ಯರಿಗೆ ಇನ್ನೂ ಹೆಚ್ಚಿನ ಅನುಕೂಲವಾಗುತ್ತದೆ.**

**3. ಜನವರಿ-2020 ತಿಂಗಳಿನಲ್ಲಿ ರಾಜ್ಯದ ಎಲ್ಲಾ ಗ್ರಾಮಪಂಚಾಯತ್ ಕೇಂದ್ರಗಳಲ್ಲಿ ಶಿಬಿರ ಮಾದರಿಯಲ್ಲಿ ಎಬಿ-ಎಆರ್ ಕೆ ಕಾರ್ಡ್‌ಗಳನ್ನು ವಿತರಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವುದು ಹಾಗೂ ಎಲ್ಲಾ ಗ್ರಾಮಪಂಚಾಯತಿಗಳ ವ್ಯಾಪ್ತಿಯಲ್ಲಿ ವಾಸ್ತವ್ಯವಿರುವ ಜನಸಾಮಾನ್ಯರಿಗೆ, ನೌಕರರಿಗೆ, ಆಶಾ ಕಾರ್ಯಕರ್ತೆಯರಿಗೆ, ಶಾಲಾ ಮಕ್ಕಳಿಗೆ ಹಾಗೂ ಪ್ರಧಾನಮಂತ್ರಿ ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವವರಿಗೆ ಶಿಬಿರ ಮಾದರಿಯಲ್ಲಿ ಎಬಿ-ಎಆರ್ ಕೆ ಕಾರ್ಡ್ ವಿತರಿಸಲು ಈ ಮೂಲಕ ಸೂಚಿಸಿದೆ.**

(ಜಾವೇದ್ ಅಖ್ತರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

(ಎಲ್.ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ :

ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

Scanned by CamScanner